**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ : 2014–15ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:1) ವ್ಯವಸ್ಥಾಪಕ ನಿರ್ದೇಶಕರು, KSBDB ರವರ ಪತ್ರ ಸಂಖ್ಯೆ : KSBDB/Grant-in-Aid/CR-18/2011-12/365 ದಿನಾಂಕ 30.12.2014

2) ಸರ್ಕಾರಿ ಪತ್ರ ಸಂಖ್ಯೆ : ಗ್ರಾಅಪ/21/ಜೈಅಯೋ/2014 ದಿನಾಂಕ: 19.07.2014

3) ಸರ್ಕಾರಿ ಪತ್ರ ಸಂಖ್ಯೆ : ಗ್ರಾಅಪ/43/ಜೈಅಯೋ/2014 ದಿನಾಂಕ: 23.06.2014

4) ಸರ್ಕಾರಿ ಪತ್ರ ಸಂಖ್ಯೆ : ಗ್ರಾಅಪ/43/ಜೈಅಯೋ/2014 ದಿನಾಂಕ: 02.09.2014

*****

**ಪ್ರಸ್ತಾವನೆ :**

2014–15ನೇ ಸಾಲಿನ ರಾಜ್ಯ ಆಯವ್ಯಯದಡಿ, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ₹ 130.00ಲಕ್ಷಗಳ ಅನುದಾನ ನಿಗದಿಪಡಿಸಲಾಗಿದೆ. 2014–15ನೇ ಸಾಲಿನಲ್ಲಿ ಉಲ್ಲೇಖ (2)ರ ಸರ್ಕಾರಿ ಪತ್ರದ ಪ್ರಕಾರ ರೂ.200.00ಲಕ್ಷ ಹೆಚ್ಚುವರಿ ಅನುದಾನವನ್ನಾಗಿ ಆರ್ಥಿಕ ಇಲಾಖೆಯು ಒದಗಿಸಿದ್ದು, ಈ ಪೈಕಿ ಮೊದಲನೇ ಪೂರಕ ಅಂದಾಜಿನಲ್ಲಿ ರೂ.100.00ಲಕ್ಷಗಳನ್ನು ಬಿಡುಗಡೆ ಮಾಡಿರುತ್ತದೆ. ಆದುದರಿಂದ ಹಾಲಿ ಕರ್ನಾಟಕ ಜೈವಿಕ ಇಂಧನ ನೀತಿ ಅನುಷ್ಠಾನಕ್ಕಾಗಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ಈ ಸಾಲಿನಲ್ಲಿ ರೂ.230.00ಲಕ್ಷ ಒಟ್ಟು ಅನುದಾನ ಲಭ್ಯವಿದ್ದು, ಅದರಲ್ಲಿ ಈಗಾಗಲೇ ರೂ.115.00ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಬಾಕಿ ಉಳಿದಿರುವ ಅನುದಾನವನ್ನು ಮೂರನೇ ಕಂತಾಗಿ ₹ 115.00 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2501–04–105–0–03–059 (ಯೋಜನೆ)ರಡಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿರುವ ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/43/ಜೈಅಯೋ/2014, ಬೆಂಗಳೂರು, ದಿನಾಂಕ 03.03.2015**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರಿಗೆ ಲೆಕ್ಕ ಶೀರ್ಷಿಕೆ 2501–04–105–0–03–059 (ಯೋಜನೆ) ರಡಿ **₹ 115.00 ಲಕ್ಷಗಳನ್ನು** (ರೂಪಾಯಿ ಒಂದು ನೂರಾ ಹದಿನೈದು ಲಕ್ಷಗಳನ್ನು ಮಾತ್ರ) ಜೈವಿಕ ಇಂಧನ ಅಭಿವೃದ್ಧಿಗಾಗಿ ವಿನಿಯೋಗಿಸಲು ಈ ಕೆಳಕಂಡ ನಿಬಂದನೆಗೊಳಪಟ್ಟು ಬಿಡುಗಡೆ ಮಾಡಿದೆ.

ಸದರಿ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿದ್ದು, ಉದ್ದೇಶಿತ ಕಾರ್ಯಕ್ರಮಕ್ಕಾಗಿ ಮಾತ್ರ ವಿನಿಯೋಗಿಸತಕ್ಕದ್ದು.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರು ಗ್ರಾಂಟ್–ಇನ್–ಏಡ್ ಬಿಲ್ಲನ್ನು ಸಲ್ಲಿಸಿ, ನಿರ್ದೇಶಕರು (ಗ್ರಾಮೂಸೌ–2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿರವರ ಮೇಲು ರುಜು ಪಡೆದು, ರಾಜ್ಯ ಹುಜೂರ್ ಖಜಾನೆಯಿಂದ ಅನುದಾನವನ್ನು

ಪಡೆಯತಕ್ಕದ್ದು. ಬಿಡುಗಡೆ ಮಾಡಲಾಗಿರುವ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿಯಾಗಿ ಸಲ್ಲಿಸುವುದು.

ಈ ಅನುದಾನವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 61 ವೆಚ್ಚ-6 /2015 ದಿನಾಂಕ: 27-2-2015ರ ಸಹಮತಿ ಪಡೆದು ಬಿಡುಗಡೆಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್ ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರುಗಳಿಗೆ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು.
4. ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7. ಉಪ ನಿರ್ದೇಶಕರು (ತಾಂತ್ರಿಕ), ರಸ್ತೆ ಮತ್ತು ಸೇತುವೆ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ಕೇಂದ್ರ, ಖನಿಜ ಭವನ, ಬೆಂಗಳೂರು.
9. ಕಛೇರಿ ಕಡತಕ್ಕೆ / ಹೆಚ್ಚುವರಿ ಪ್ರತಿ.